**All India Radio: Bangalore**
**National Bulletin In Kannada**
**17.02.2026  19.35 p.m.**
**ಆಕಾಶವಾಣಿ, ಬೆಂಗಳೂರು**

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮುಂಬೈನಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ದ್ವಿಪಕ್ಷೀಯ ಮಾತುಕತೆ

೨. ಭಾರತದ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ೨೦೦ ಶತಕೋಟಿ ಡಾಲರ್‌ಗೂ ಹೆಚ್ಚಿನ ಹೂಡಿಕೆ ನಿರೀಕ್ಷೆ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೩. ಬಾರಾಮತಿ ವಿಮಾನ ಅಪಘಾತ: ಡಿಜಿಟಲ್ ವಿಮಾನ ದತ್ತಾಂಶ ಧ್ವನಿಮುದ್ರಿಕೆ ಲಭ್ಯ - ನಾಗರಿಕ ವಿಮಾನಯಾನ ಸಚಿವಾಲಯ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಡಿ ಗುಂಪಿನ ಪಂದ್ಯದಲ್ಲಿ ಕೆನಡಾ ವಿರುದ್ಧ ನ್ಯೂಜಿಲೆಂಡ್ ತಂಡಕ್ಕೆ ೮ ವಿಕೆಟ್‌ಗಳ ಭರ್ಜರಿ ಗೆಲುವು

****************

ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಇಂದು ಮುಂಬೈನ ಲೋಕ ಭವನದಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ರಕ್ಷಣೆ, ಭದ್ರತೆ, ವ್ಯಾಪಾರ ಮತ್ತು ಸಾಂಸ್ಕೃತಿಕ ವಿನಿಮಯ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಭಾರತ ಮತ್ತು ಫ್ರಾನ್ಸ್ ನಡುವಿನ ಕಾರ್ಯತಂತ್ರದ ಸಹಕಾರದ ಕುರಿತು ಉಭಯ ನಾಯಕರು ಚರ್ಚಿಸಿದರು.

ಇದಕ್ಕೂ ಮುನ್ನ ತಾಜ್ ಮಹಲ್ ಪ್ಯಾಲೇಸ್ ಹೋಟೆಲ್‌ನಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರು ೨೬/೧೧ ಮುಂಬೈ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಗೌರವ ಸಲ್ಲಿಸಿದರು. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಒಗ್ಗಟ್ಟನ್ನು ಪುನರುಚ್ಚರಿಸಿದರು.

ಸಾಮಾಜಿಕ ಜಾಲತಾಣದಲ್ಲಿ ಫ್ರಾನ್ಸ್ ಅಧ್ಯಕ್ಷರು, ಭಯೋತ್ಪಾದನೆ, ಏಕತೆ ಮತ್ತು ದೃಢಸಂಕಲ್ಪದ ವಿರುದ್ಧ ಫ್ರಾನ್ಸ್ ಭಾರತದೊಂದಿಗೆ ನಿಂತಿದೆ. ಬಲಿಪಶುಗಳ ಕುಟುಂಬಗಳು ಮತ್ತು ಪ್ರೀತಿಪಾತ್ರರಿಗೆ ಬೆಂಬಲವನ್ನು ನೀಡುತ್ತದೆ ಎಂದು  ಹೇಳಿದ್ದಾರೆ. ಇನ್ನೊಂದೆಡೆ, ಭಾರತೀಯ ಚಿತ್ರರಂಗದ ಪ್ರಮುಖ ವ್ಯಕ್ತಿಗಳೊಂದಿಗೆ ಎಮ್ಯಾನುಯೆಲ್ ಮ್ಯಾಕ್ರನ್ ಸಂವಾದ ನಡೆಸಿದರು.

****************

ಮುಂದಿನ ಎರಡು ವರ್ಷಗಳಲ್ಲಿ ಎಐ ಕ್ಷೇತ್ರಗಳಲ್ಲಿ ಭಾರತ ೨೦೦ ಶತಕೋಟಿ ಡಾಲರ್‌ಗೂ ಹೆಚ್ಚಿನ ಹೂಡಿಕೆಯನ್ನು ನಿರೀಕ್ಷಿಸುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ರ ಕುರಿತ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಶೃಂಗಸಭೆಗೆ ಭಾರಿ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ದೇಶದ ಮೂಲೆ-ಮೂಲೆಯಿಂದಲೂ ಜನರು ಆಗಮಿಸುತ್ತಿದ್ದಾರೆ ಎಂದರು.

ಕೃತಕಬುದ್ಧಿಮತ್ತೆಯ ಸರಿಯಾದ ಮತ್ತು ಜವಾಬ್ದಾರಿಯುತ ಬಳಕೆಯ ಕುರಿತು ಜಾಗತಿಕ ನಾಯಕರಲ್ಲಿ ಒಮ್ಮತ ಮೂಡಿಸಲು ಭಾರತ ಶ್ರಮಿಸುತ್ತಿದೆ. ಕೃತಕ ಬುದ್ಧಿಮತ್ತೆಯನ್ನು ಮಾನವರ ಉದ್ಧಾರಕ್ಕೆ ಬಳಸಬಹುದಾಗಿದೆ ಎಂದು ಅವರು ಹೇಳಿದರು.

ಧ್ವನಿ: ಅಶ್ವಿನಿ ವೈಷ್ಣವ್

ಎಐ ಪರಿಸರ ವ್ಯವಸ್ಥೆಯಲ್ಲಿ ತಾಂತ್ರಿಕ ಮತ್ತು ಕಾನೂನು ವಿಧಾನದ ಮೂಲಕ ಪರಿಹರಿಸಬೇಕಾದ ನೈಜ ಸಮಸ್ಯೆಗಳು ಅಡೆತಡೆಗಳಿವೆ. ಈ ಸವಾಲುಗಳನ್ನು ಕೇವಲ ನಿಯಮಗಳ ಮೂಲಕ ಅಥವಾ ಕಾನೂನನ್ನು ಅಂಗೀಕರಿಸುವ ಮೂಲಕ ಪರಿಹರಿಸಲಾಗುವುದಿಲ್ಲ ಎಂದು ಸಚಿವ ಅಶ್ವಿನಿ ವೈಷ್ಣವ್ ಅಭಿಪ್ರಾಯಪಟ್ಟರು.

ಇನ್ನೊಂದೆಡೆ, ಸೆಮಿಕಂಡಕ್ಟರ್ ವಿನ್ಯಾಸಕ್ಕಾಗಿ ಜಾಗತಿಕ ಕೇಂದ್ರವಾಗಿ ಹೊರಹೊಮ್ಮುವ ಸಾಮರ್ಥ್ಯವನ್ನು ಭಾರತ ಹೊಂದಿದೆ. ಭಾರತದ ಸೆಮಿಕಂಡಕ್ಟರ್ ಮಿಷನ್‌ಗೆ ಕಳೆದ ವರ್ಷ ಬಹಳ ಉತ್ತೇಜನಕಾರಿಯಾಗಿತ್ತು. ವಿನ್ಯಾಸ ಸಾಮರ್ಥ್ಯಗಳು ಬಲವಾದ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯ ಅಡಿಪಾಯವಾಗಿದೆ ಎಂದು ಸಚಿವರು ಹೇಳಿದ್ದಾರೆ.

****************

ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ಎಂಬುದು ಆಲೋಚನೆಗಳು, ನಾವೀನ್ಯತೆ ಮತ್ತು ಉದ್ದೇಶಗಳ ಪ್ರಬಲ ಸಂಗಮವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಅವರು, ಜಾಗತಿಕ ಕಲ್ಯಾಣಕ್ಕಾಗಿ ಕೃತಕ ಬುದ್ಧಿಮತ್ತೆಯ ಭವಿಷ್ಯವನ್ನು ರೂಪಿಸುವಲ್ಲಿ ಭಾರತೀಯ ಪ್ರತಿಭೆಗಳ ಅಸಾಧಾರಣ ಸಾಮರ್ಥ್ಯವನ್ನು ಈ ಪ್ರದರ್ಶನ ಅನಾವರಣಗೊಳಿಸುತ್ತಿದೆ ಎಂದು ಹೇಳಿದ್ದಾರೆ. ಮನುಕುಲದ ಪ್ರಗತಿಗಾಗಿ ಎಐ ತಂತ್ರಜ್ಞಾನವನ್ನು ಜವಾಬ್ದಾರಿಯುತವಾಗಿ ದೊಡ್ಡ ಪ್ರಮಾಣದಲ್ಲಿ ಬಳಸಿಕೊಳ್ಳುವ ಸರ್ಕಾರದ ಬದ್ಧತೆಯನ್ನು ಇದು ಪುನರುಚ್ಚರಿಸಿದೆ ಎಂದು ಅವರು ತಿಳಿಸಿದ್ದಾರೆ.

****************

ಕರ್ನಾಟಕದ ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಲಘು ಹೆಲಿಕಾಪ್ಟರ್‌ಗಳ ಅಂತಿಮ ಜೋಡಣಾ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಇಂದು ಲೋಕಾರ್ಪಣೆಗೊಳಿಸಿದರು. ಇದೇ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ-ಫ್ರಾನ್ಸ್ ಸಹಭಾಗಿತ್ವದಲ್ಲಿ ಆರಂಭಗೊಂಡಿರುವ ಈ ಹೆಲಿಕಾಪ್ಟರ್, ಮೌಂಟ್ ಎವರೆಸ್ಟ್‌ನಂತಹ ಎತ್ತರದ ಪ್ರದೇಶಗಳ ಮೇಲೂ ಹಾರಾಟ ಮಾಡಲು ಶಕ್ತವಾಗಿದೆ ಎಂದು ತಿಳಿಸಿದ್ದಾರೆ. ಈ ವೇಳೆ ವೇಮಗಲ್‌ನ ಹೆಲಿಕಾಪ್ಟರ್ ಘಟಕದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಫ್ರಾನ್ಸ್ ರಕ್ಷಣಾ ಸಚಿವೆ ಕ್ಯಾಥರಿನ್ ವ್ಯಾಟ್ರಿನ್, ಕೇಂದ್ರ ಸಚಿವ ರಾಮ್‌ಮೋಹನ್ ನಾಯ್ಡು, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮೇಕ್ ಇನ್ ಇಂಡಿಯಾ ಹಾಗೂ ಆತ್ಮನಿರ್ಭರ ಭಾರತದ ಫಲವಾಗಿ ಇಂದು ಈ ಘಟಕ ಆರಂಭಗೊಂಡಿದೆ. ಭಾರತ ಇಂದು ರಕ್ಷಣಾ ವಲಯದ

ರಫ್ತಿನಲ್ಲಿ ವಿಶ್ವದಲ್ಲೇ ಅಗ್ರಗಣ್ಯ ರಾಷ್ಟ್ರವಾಗಿ ಹೊರಹೊಮ್ಮಿದೆ. ವಿಶ್ವದ ಹಲವು ರಾಷ್ಟ್ರಗಳು ಭಾರತದ ಎಮ್‌ಎಸ್‌ಎಮ್‌ಇ ಗಳೊಂದಿಗೆ ಉತ್ಪಾದನಾ ಕ್ಷೇತ್ರಗಳಲ್ಲಿ ಪಾಲುದಾರರಾಗಲು ಬಯಸುತ್ತಿದೆ ಎಂದು ತಿಳಿಸಿದ್ದಾರೆ.

ಎಚ್-೧೨೫ ಹೆಲಿಕಾಪ್ಟರ್ ಘಟಕದಿಂದ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಕೌಶಲ್ಯಯುಕ್ತ ಯುವಕರಿಗೆ ಉದ್ಯೋಗ ದೊರೆಯಲಿದೆ. ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಸಿಂಗಲ್ ಎಂಜಿನ್ ಹೆಲಿಕಾಪ್ಟರ್, ವಿಶ್ವದಲ್ಲೇ ನಂಬಿಕಾರ್ಹ ಹೆಲಿಕಾಪ್ಟರ್ ಆಗಿ ಹೊರಹೊಮ್ಮಲಿದೆ ಎಂದು ಅವರು ಹೇಳಿದ್ದಾರೆ.

****************

ಎರಡು ದಿನಗಳ ಆಂಧ್ರ ಪ್ರದೇಶದ ಭೇಟಿಗಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಸಂಜೆ ವಿಶಾಖಪಟ್ಟಣದ ಐಎನ್‌ಎಸ್ ದೇಗಾ ನೌಕಾ ವಾಯುನಿಲ್ದಾಣಕ್ಕೆ ಆಗಮಿಸಿದರು. ಈ ವೇಳೆ ಅವರನ್ನು ಆಂಧ್ರಪ್ರದೇಶ ರಾಜ್ಯಪಾಲ ಎಸ್.ಅಬ್ದುಲ್ ನಜೀರ್, ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಸೇರಿದಂತೆ ಇತರೆ ನಾಯಕರು ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ನಾಳೆ ರಾಷ್ಟ್ರಪತಿ ಅವರು ಅಂತಾರಾಷ್ಟ್ರೀಯ ನೌಕಾಪಡೆ ೨೦೨೬ ಸಮಾರಂಭದಲ್ಲಿ ಭಾಗವಹಿಸಿ ಪರಿಶೀಲನೆ ನಡೆಸಲಿದ್ದಾರೆ. ಇದೇ ವೇಳೆ ಭಾರತೀಯ ನೌಕಾಪಡೆಯ ಅದ್ಭುತ ಪ್ರದರ್ಶನವನ್ನು ಅವರು ವೀಕ್ಷಿಸಲಿದ್ದಾರೆ.

****************

ಕಳೆದ ತಿಂಗಳು ಬಾರಾಮತಿಯಲ್ಲಿ ಅಪಘಾತಕ್ಕೀಡಾದ ಲಿಯರ್‌ಜೆಟ್ ೪೫ ವಿಮಾನದ ಡಿಜಿಟಲ್ ವಿಮಾನ ದತ್ತಾಂಶ ಧ್ವನಿಮುದ್ರಿಕೆಯನ್ನು ವಿಮಾನ ಅಪಘಾತ ತನಿಖಾ ದಳದ ವಿಮಾನ ಧ್ವನಿಮುದ್ರಿಕೆ ಪ್ರಯೋಗಾಲಯವು ಯಶಸ್ವಿಯಾಗಿ ಡೌನ್‌ಲೋಡ್ ಮಾಡಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಇತರ ನಾಲ್ವರು ಸಾವನ್ನಪ್ಪಿದ ಅಪಘಾತದ ಬಗ್ಗೆ ವಿಮಾನ ಅಪಘಾತ ತನಿಖಾ ದಳ ವಿವರವಾದ ತನಿಖೆ ನಡೆಸುತ್ತಿದೆ. ಕಾಕ್‌ಪಿಟ್ ಧ್ವನಿ ಮುದ್ರಿಕೆಯು ವಿವರವಾದ ತಾಂತ್ರಿಕ ಪರೀಕ್ಷೆಗೆ ಒಳಗಾಗುತ್ತಿದೆ. ದತ್ತಾಂಶ ಮರುಪಡೆಯುವಿಕೆಯಲ್ಲಿ ವಿಶೇಷ ಬೆಂಬಲಕ್ಕಾಗಿ ಮಾನ್ಯತೆ ಪಡೆದ ಸಂಸ್ಥೆಯಿಂದ ಸಹಾಯ ಕೋರಲಾಗಿದೆ. ವಿಮಾನವು ಎರಡು ಸ್ವತಂತ್ರ ವಿಮಾನ ದತ್ತಾಂಶ ಧ್ವನಿಮುದ್ರಿಕೆಗಳನ್ನು ಹೊಂದಿದ್ದು, ಅಪಘಾತದ ಸಮಯದಲ್ಲಿ ದೀರ್ಘಕಾಲದವರೆಗೆ ತೀವ್ರವಾದ ಶಾಖಕ್ಕೆ ಒಡ್ಡಿಕೊಂಡಿತ್ತು ಎಂದು ಸಚಿವಾಲಯ ಮಾಹಿತಿ ನೀಡಿದೆ.

****************

ಭಾರತ ಇಂದು ಜಾಗತಿಕ ಪಾಲುದಾರರೊಂದಿಗೆ ಹೆಚ್ಚು ತೀವ್ರವಾಗಿ ತೊಡಗಿಸಿಕೊಂಡಿದೆ. ಇತ್ತೀಚೆಗೆ ಮುಕ್ತಾಯಗೊಂಡ ವ್ಯಾಪಾರ ಒಪ್ಪಂದಗಳು ಬೆಳೆಯುತ್ತಿರುವ ಆರ್ಥಿಕ ವಿಶ್ವಾಸಕ್ಕೆ ಸಾಕ್ಷಿಯಾಗಿವೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಜಾಗತಿಕ ಆರ್ಥಿಕ ಸಹಕಾರ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಶಸ್ತ್ರವಾಗಿ ಉತ್ಪಾದನೆ ಮತ್ತು ಹಣಕಾಸು ಬಳಕೆ, ರಫ್ತು ನಿಯಂತ್ರಣಗಳನ್ನು ಬಿಗಿಗೊಳಿಸುವುದು ಮತ್ತು ಹೆಚ್ಚುತ್ತಿರುವ ಅನಿಶ್ಚಿತತೆಯನ್ನು ಜಗತ್ತು ಗಮನಿಸುತ್ತಿದೆ. ಜಾಗತಿಕ ಕ್ರಮವು ಗಮನಾರ್ಹ ಬದಲಾವಣೆಗೆ ಒಳಗಾಗುತ್ತಿದೆ ಎಂದರು.

****************

ಬಾಂಗ್ಲಾದೇಶದ ನೂತನ ಪ್ರಧಾನಿಯಾಗಿ ಬಿಎನ್‌ಪಿ ಮುಖ್ಯಸ್ಥ ತಾರಿಕ್ ರೆಹಮಾನ್ ಇಂದು ಪ್ರಮಾಣವಚನ ಸ್ವೀಕರಿಸಿದ್ದಾರೆ. ಇತ್ತೀಚೆಗೆ ನಡೆದ ೧೩ನೇ ಸಾರ್ವತ್ರಿಕ ಚುನಾವಣೆಯಲ್ಲಿ ಬಾಂಗ್ಲಾದೇಶ ರಾಷ್ಟ್ರೀಯ ಪಕ್ಷ ಭರ್ಜರಿ ಜಯ ಸಾಧಿಸಿತ್ತು. ಢಾಕಾದ ಜತಿಯಾ ಸಂಸದ್‌ನ ದಕ್ಷಿಣ ಪ್ಲಾಜಾದಲ್ಲಿ ಬಾಂಗ್ಲಾದೇಶ ಅಧ್ಯಕ್ಷ ಮೊಹಮ್ಮದ್ ಶಹಬುದ್ದೀನ್ ಅವರು ೬೦ ವರ್ಷದ ತಾರಿಕ್ ರೆಹಮಾನ್ ಅವರಿಗೆ ಪ್ರಮಾಣವಚನ ಬೋಧಿಸಿದರು. ಪ್ರಮಾಣವಚನ ಸಮಾರಂಭದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಸೇರಿದಂತೆ ವಿದೇಶಗಳ ಹಲವು ಗಣ್ಯರು ಉಪಸ್ಥಿತರಿದ್ದರು.

****************

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆದ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಡಿ ಗುಂಪಿನ ಪಂದ್ಯದಲ್ಲಿ ಕೆನಡಾ ವಿರುದ್ಧ ನ್ಯೂಜಿಲೆಂಡ್ ೮ ವಿಕೆಟ್‌ಗಳಿಂದ ಭರ್ಜರಿ ಗೆಲುವು ಸಾಧಿಸಿದೆ.

ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ ನಿಗದಿತ ೨೦ ಓವರ್‌ಗಳಲ್ಲಿ ನಾಲ್ಕು ವಿಕೆಟ್ ನಷ್ಟಕ್ಕೆ ೧೭೩ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ನ್ಯೂಜಿಲೆಂಡ್ ೧೫.೧ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೭೬ ರನ್ ಗಳಿಸಿ ಗೆಲುವಿನ ನಗೆ ಬೀರಿತು. ೩೬ ಎಸೆತೆಗಳಲ್ಲಿ ೭೬ ರನ್ ಸಿಡಿಸಿದ ಗ್ಲೆನ್ ಫಿಲಿಪ್ಸ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಐರ್ಲೆಂಡ್ ಮತ್ತು ಜಿಂಬಾಬ್ವೆ ತಂಡಗಳ ನಡುವೆ ಇಂದು ನಡೆಯಬೇಕಿದ್ದ ಬಿ ಗುಂಪಿನ ಪಂದ್ಯ ಮಳೆಯ ಕಾರಣದಿಂದಾಗಿ ರದ್ದುಗೊಳಿಸಲಾಗಿದೆ.

********ಮುಕ್ತಾಯ********